ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 15 (PMKVY)/2016-17 1059

ನಿರ್ದೇಶಕರ ಕಛೇರಿ
ಅರಮನೆ ರಸ್ತೆ
ಬೆಂಗಳೂರು 560 001
ದಿ: 28-06-2018

**-:ಸುತ್ತೋಲೆ:-**

ವಿಷಯ: "ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಯೋಜನೆ" (PMKVY) ಯನ್ನು ಕರ್ನಾಟಕ ರಾಜ್ಯದ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಹಾಗೂ ಪಾಲಿಟೆಕ್ನಿಕ್‌ಗಳಲ್ಲಿ ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ: ಸಹಾಯಕ ನಿರ್ದೇಶಕರು, ಸ್ಕಿಲ್ ಡೆವ್ಲೆಪ್‌ಮೆಂಟ್, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್‌ರವರ ಮಿಂಚಂಚೆ ದಿನಾಂಕ:22-06-2018.

*****

ಭಾರತ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯವು, ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್, ನವದೆಹಲಿವತಿಯಿಂದ "ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಯೋಜನೆ"(PMKVY)ಅಡಿಯಲ್ಲಿ ನಿರುದ್ಯೋಗಿ ಯುವಕ/ಯುವತಿಯರಿಗೆ ತಾಂತ್ರಿಕ ವಿಷಯಗಳಲ್ಲಿ ಕೌಶಲ್ಯ ತರಬೇತಿಗಳನ್ನು ನೀಡಲು ಎಐಸಿಟಿಇಯಿಂದ ಮಾನ್ಯತೆ ಪಡೆದ ಇಂಜಿನಿಯರಿಂಗ್ ಕಾಲೇಜುಗಳ ಹಾಗೂ ಪಾಲಿಟೆಕ್ನಿಕ್‌ಗಳ ಮುಖಾಂತರ ಯೋಜನೆಯನ್ನು ಜಾರಿಗೊಳಿಸಲು ಅವಕಾಶ ಕಲ್ಪಿಸಲಾಗಿದೆ.

ತತ್ಸಂಬಂಧ, ಕರ್ನಾಟಕ ರಾಜ್ಯದ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಪಾಲಿಟೆಕ್ನಿಕ್‌ಗಳಲ್ಲಿ "ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಯೋಜನೆ" (PMKVY)ಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಪ್ರಾಚಾರ್ಯರುಗಳು ಪ್ರಸ್ತುತ ಸಂಸ್ಥೆಗಳಲ್ಲಿರುವ ಮೂಲ ಸೌಕರ್ಯಗಳನ್ನು ಉಪಯೋಗಿಸಿಕೊಂಡು, ನ್ಯಾಷನಲ್ ಸ್ಕಿಲ್ ಕ್ವಾಲಿಫಿಕೇಷನ್ ಫ್ರೇಮ್ ವರ್ಕ್(NSQF) ಚೌಕಟ್ಟಿನಲ್ಲಿ ನಿರುದ್ಯೋಗಿ ಯುವಕ/ಯುವತಿಯರಿಗೆ ಅವಶ್ಯಕತೆಗೆ ಅನುಗುಣವಾಗಿ ಬೇಕಾಗಿರುವ ತಾಂತ್ರಿಕ ವಿಷಯಗಳಲ್ಲಿ ಕೌಶಲ್ಯ ತರಬೇತಿಗಳನ್ನು ನೀಡಿ, ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ, ಎಐಸಿಟಿಇಯ ಪೋರ್ಟಲ್‌ನಲ್ಲಿ PMKVY-TI Scheme for the AY 2018-19 ರಡಿಯಲ್ಲಿ ಆನ್ ಲೈನ್ ಮೂಲಕ ತಮ್ಮ ತಮ್ಮ ಸಂಸ್ಥೆಗಳನ್ನು ನೊಂದಾಯಿಸಿಕೊಳ್ಳಲು ಅವಕಾಶಕಲ್ಪಿಸಲಾಗಿದೆ. ಆದಕಾರಣ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರು ಹಾಗೂ (PMKVY)ಸಂಯೋಜಕರು ಈ ಯೋಜನೆಯ ಸದುಉಪಯೋಗಪಡೆದುಕೊಳ್ಳಲು ಈ ಮೂಲಕ ಸೂಚಿಸಲಾಗಿದೆ.

ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಸ್ಥೆಗಳಿಗೆ ಎಐಸಿಟಿಇಯು ಈ ಯೋಜನೆಯ ನಿಬಂಧನೆ ಹಾಗೂ ನಿಯಮಾನುಸಾರ ಅನುದಾನ ನೀಡಲಾಗುವುದು. "ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ ಯೋಜನೆ" (PMKVY)ಅಡಿಯಲ್ಲಿ ತಾಂತ್ರಿಕ ಕೌಶಲ್ಯ ತರಬೇತಿಗಳನ್ನು ನೀಡುವ ಸಂಸ್ಥೆಗಳನ್ನು, ರಾಜ್ಯಮಟ್ಟದ ಸಮಿತಿಯ ಶಿಫಾರಸ್ಸಿನ ಮೇರೆಗೆ, ನ್ಯಾಷನಲ್ ಸ್ಟೀರಿಂಗ್ ಕಮಿಟಿಯವರು ಆಯ್ಕೆ ಮಾಡುತ್ತಾರೆ. ಈ ಸಂಬಂಧವಾಗಿ, ಹೆಚ್ಚಿನ ಮಾಹಿತಿಯನ್ನು www.aicte-india.org/schemes/pmkvy/pmkvy 2018-19 ನಲ್ಲಿ ಪಡೆಯಲು ಈ ಮೂಲಕ ಸೂಚಿಸಲಾಗಿದೆ.

ನಿರ್ದೇಶಕರು

ಇವರಿಗೆ:
1. ರಾಜ್ಯದ ಎಲ್ಲಾ ಇಂಜಿನಿಯರಿಂಗ್ ಕಾಲೇಜುಗಳ ಹಾಗೂ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, 2ನೇ ಮಹಡಿ, ಬೆಂಗಳೂರು ಡಿಟಿಇ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಮುಂದಿನ ಕ್ರಮಕ್ಕಾಗಿ.
3. ನಿರ್ದೇಶಕರ ಆಪ್ತ ಶಾಖೆಗೆ ಮಾಹಿತಿಗಾಗಿ.